## 48. ಕ್ರಿಯಾ ಯೋಜನೆ ತ್ವರಿತ ಜಾರಿಗೆ ಸೂಚನೆ

ಪ್ರಸಕ್ತ ಹಣಕಾಸು ವರ್ಷದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಎಲ್ಲ ನಿಗಮಗಳ ಕ್ರಿಯಾ ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ತ್ವರಿತ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಸಮಾಜ ಕಲ್ಯಾಣ ಸಚಿವರಾದ ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ ಸೂಚನೆ ನೀಡಿದರು.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಭೂ ಒಡೆತನ, ಸಮಗ್ರ ಗಂಗಾ ಕಲ್ಯಾಣ ವೈಯುಕ್ತಿಕ ನೀರಾವರಿ, ಕೊಳವೆಬಾವಿ ಯೋಜನೆ, ಸ್ವಯಂ ಉದ್ಯೋಗ ಯೋಜನೆ, ಸೂಕ್ಷ್ಮ ಸಾಲ (ಪ್ರೇರಣಾ) ಯೋಜನೆ, ತರಕಾರಿ ಹಣ್ಣು-ಹಂಪಲು ಹೈನುಗಾರಿಕೆಯಂತಹ ಕಿರು ಆರ್ಥಿಕ ಯೋಜನೆಗಳಿಗಾಗಿ ನಿಗಮಗಳಿಂದ ನೇರ ಸಾಲ ಯೋಜನೆಗೆ ಗುರಿ ನಿಗದಿಪಡಿಸಲಾಗಿದ್ದು, ಅದರಂತೆ ಸೌಲಭ್ಯ ಕಲ್ಪಿಸಬೇಕು.

ಅರಣ್ಯ ಆಧಾರಿತ ಆದಿವಾಸಿ, ಅಲೆಮಾರಿ ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಜನಾಂಗದವರಿಗೆ ಮೈಕ್ರೋ ಕ್ರೆಡಿಟ್ ಯೋಜನೆಗಳಡಿ ನಿಗಮಗಳಿಗೆ ಗುರಿ ಗೊತ್ತುಪಡಿಸಲಾಗಿದ್ದು, ಅದರಂತೆ ಸೌಲಭ್ಯ ಕಲ್ಪಿಸಬೇಕು. ಕೋವಿಡ್-19 ಹಿನ್ನೆಲೆಯಲ್ಲಿ ಪರಿಶಿಷ್ಟ ಜಾತಿ ಪಂಗಡದ ಸಮುದಾಯದವರು ತೀವ್ರ ಸಂಕಷ್ಟದಲ್ಲಿದ್ದು, ಅವರಿಗೆ ನೆರವಾಗುವಂತೆ ಯೋಜನೆಗಳನ್ನು ತ್ವರಿತವಾಗಿ ಜಾರಿಗೊಳಿಸಬೇಕು. ಬಾಕಿ ಉಳಿದಿರುವ ಕೊಳವೆ ಬಾವಿಗಳನ್ನು ತ್ವರಿತವಾಗಿ ಕೊರೆಸಿ ಫಲಾನುಭವಿಗಳಿಗೆ ನೆರವಾಗಬೇಕು. ಭೂ ಒಡೆತನ ಯೋಜನೆಯಡಿ ಆಯ್ಕೆಯಾಗಿರುವ ಎಲ್ಲ ಪ್ರಸ್ತಾವನೆಗಳಿಗೆ ಕೂಡಲೇ ಮಂಜೂರಾತಿ ನೀಡಿ, ಅನುದಾನ ಬಿಡುಗಡೆ ಮಾಡಬೇಕು. ನಿಗಮಗಳ ವ್ಯವಸ್ಥಾಪಕರು ಜಿಲ್ಲೆಗಳಿಗೆ ಪ್ರವಾಸ ಕೈಗೊಂಡು ಪ್ರಗತಿ ಪರಿಶೀಲನೆ ನಡೆಸಬೇಕು. ಜಿಲ್ಲಾಧಿಕಾರಿಗಳೊಂದಿಗೂ ಸಮನ್ವಯ ಸಾಧಿಸಿಕೊಂಡು ಭೂ ಒಡೆತನ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು ಎಂದು ಸೂಚನೆ ನೀಡಿದರು.

ಎಸ್‌ಸಿಪಿ-ಟಿಎಸ್‌ಪಿ ಯೋಜನೆ ಸಲಹೆಗಾರ ಇ.ವೆಂಕಟಯ್ಯ, ಕರ್ನಾಟಕ ಮಹರ್ಷಿ ವಾಲ್ಮೀಕಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಹನುಮ ನರಸಯ್ಯ, ಕರ್ನಾಟಕ ಭೋವಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಮಾಯಾದೇವಿ ಗಲಗಲಿ ಇತರರು ಉಪಸ್ಥಿತರಿದ್ದರು.

ಆಧಾರ:ಉದಯವಾಣಿ, ದಿನಾಂಕ:30.07.2020